
# 16. CONSTITUTION DAY 2021-22




ANJUMAN DEGREE COLLEGE AND P.G.
CONSTITUTION DAY



# SUMMARY REPORT ON CONSTITUTION DAY 2021-22

**ಅಂಜುಮನ್ ಕಲಾ, ವಿಜ್ಞಾನ, ವಾಣಿಜ್ಯ ಮಹಾವಿದ್ಯಾಲಯ ಮತ್ತು ಸ್ನಾತಕೋತ್ತರ ಕೇಂದ್ರ, ಭಟ್ಕಳ.**

**ರಾಷ್ಟ್ರೀಯ ಸೇವಾ ಯೋಜನ ಘಟಕ ಹಮ್ಮಿಕೊಂಡ**
**ಸಂವಿಧಾನ ದಿನಾಚರಣೆಯ ವರದಿ**

ಇಂದು ಬೆಳಿಗ್ಗೆ 11–00 ಗಂಟೆಗೆ ಸರಿಯಾಗಿ ನಮ್ಮ ಕಾಲೇಜಿನ ಸಭಾಭವನದಲ್ಲಿ ಸಂವಿಧಾನ ದಿನಾಚರಣೆಯ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು. ಪ್ರಾಂಶುಪಾಲರ ಅಧ್ಯಕ್ಷತೆಯಲ್ಲಿ ನಡೆದ ಈ ಸಮಾರಂಭಕ್ಕೆ ಮುಖ್ಯ ಅತಿಥಿ ಮತ್ತು ಭಾಷಣಕಾರರಾಗಿ ಶಿರಾಲಿಯ ಜನತಾವಿದ್ಯಾಲಯದ ರಾಜ್ಯಶಾಸ್ತ್ರದ ಉಪನ್ಯಾಸಕರಾದ ಶ್ರೀ ರವಿ ಚಿತ್ರಾಪುರ ಆಗಮಿಸಿದ್ದರು. ಶ್ರೀಯುತರು, ಸಂವಿಧಾನದತ್ತವಾದ ಹಕ್ಕುಗಳನ್ನು ನ್ಯಾಯ ಮಾರ್ಗದಲ್ಲಿ ಪಡೆದುಕೊಳ್ಳುತ್ತ ಸಂವಿಧಾನ ಸೂಚಿಸಿದ ಕರ್ತವ್ಯಗಳನ್ನು ಪರಿಪಾಲಿಸುತ್ತ ಘನತೆವೆತ್ತ ಸಂವಿಧಾನದ ಆಶಯಗಳನ್ನು ಸಾಕಾರಗೊಳಿಸಬೇಕೆಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಮುಂದುವರೆದು ರವಿ ಚಿತ್ರಾಪುರ, ಸಂವಿಧಾನ ರಚನೆಯ ಹಿನ್ನೆಲೆ, ಸಂವಿಧಾನ ರಚನಾಕಾರರು ಜಗತ್ತಿನಲ್ಲಿಯೇ ಉತ್ತಮ ಸಂವಿಧಾನವನ್ನು ರಚಿಸುವಲ್ಲಿ ಪಟ್ಟ ಪರಿಶ್ರಮ, ಸಂವಿಧಾನದ ಯಾವ ಯಾವ ಭಾಗದಲ್ಲಿ ಯಾವ ಯಾವ ವಿಚಾರಗಳನ್ನು ಪ್ರಸ್ತಾಪಿಸಲಾಗಿದೆ, ಜಗತ್ತಿನ ಬೇರೆ ಬೇರೆ ದೇಶಗಳ ಸಂವಿಧಾನದಿಂದ ಯಾವ ಯಾವ ಅಂಶಗಳನ್ನು ಎತ್ತಿಕೊಳ್ಳಲಾಗಿದೆ ಇತ್ಯಾದಿ ವಿಚಾರಗಳನ್ನು ಎಳೆಯೆಳೆಯಾಗಿ ತಿಳಿಸಿಕೊಟ್ಟರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ ಕಾಲೇಜಿನ ಪ್ರಾಚಾರ್ಯರಾದ ಪ್ರೊ. ಎಂ. ಕೆ. ಶೇಖ್ ಭಾರತೀಯ ಸಂವಿಧಾನದ ಶ್ರೇಷ್ಠತೆಯನ್ನು ಹೇಳುವುದರ ಜೊತೆಗೆ, ಸಂವಿಧಾನದ ನೆರಳಿನಡಿಯಲ್ಲಿ ಭಾರತೀಯರಾದ ನಾವೆಲ್ಲ ಯಾವುದೇ ಜಾತಿ ಮತ ಧರ್ಮ ಭಾಷೆ ಲಿಂಗ ಪ್ರದೇಶಗಳ ಬೇಧವಿಲ್ಲದೆ ಒಂದಾಗಿದ್ದೇವೆ ಎಂಬುದನ್ನು ನೆನಪಿಸುವುದರ ಜೊತೆಗೆ ಸಂವಿಧಾನದ ಆಶಯಗಳಿಗೆ ಕುಂದುಬರದಂತೆ ನಡೆದುಕೊಳ್ಳಬೇಕಾದ ಅಗತ್ಯವನ್ನು ಒತ್ತಿ ಹೇಳಿದರು.

ರಾಷ್ಟ್ರೀಯ ಸೇವಾ ಯೋಜನ ಘಟಕದ ಅಧಿಕಾರಿಯಾದ ಪ್ರೊ. ಆರ್. ಎಸ್. ನಾಯಕ ಪ್ರಾಸ್ತಾವಿಕ ನುಡಿಗಳನ್ನಾಡಿ ಸರ್ವರನ್ನು ಸ್ವಾಗತಿಸಿದರೆ, ವಿದ್ಯಾರ್ಥಿ ಶ್ರೇಯಸ್ ನಾಯಕ ಅತಿಥಿಗಳನ್ನು ಪರಿಚಯಿಸಿದರು. ಆರಂಭದಲ್ಲಿ ನಯೀಮ್ ಪ್ರಾರ್ಥಿಸಿದರೆ, ಕೊನೆಯಲ್ಲಿ ಸ್ವಾತಿ ನಾಯ್ಕ ವಂದಿಸಿದರು. ಹಿರಿಯ ಪ್ರಾಧ್ಯಾಪಕರಾದ ಪ್ರೊ. ಎಸ್. ಎ. ಇಂಡಿಕರ್ ಮತ್ತು ಪ್ರೊ. ಬಿ. ಎಚ್. ನದಾಫ್ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಕುಮಾರಿ ನಯನಾ ಮೊಗೇರ ಮತ್ತು ದೀಪಾ ನಾಯ್ಕ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರ್ವಹಿಸಿದರು. ಕುಮಾರಿ ಲಾವಣ್ಯ ಸಂವಿಧಾನದ ಪೀಠಿಕೆಯನ್ನು ವಾಚಿಸಿದರು.

ವಂದನೆಗಳೊಂದಿಗೆ–

ಶ್ರೀ. ಆರ್. ಎಸ್. ನಾಯಕ
ಎನ್‌ಎಸ್‌ಎಸ್ ಘಟಕಾಧಿಕಾರಿ

ಸ್ಥಳ: ಭಟ್ಕಳ
ದಿನಾಂಕ : 26/11/2021

IQAC & NAAC CO-ORDINATOR
Anjuman Arts, Science,
Commerce College & P.G Centre
Bhatkal

ANJUMAN ARTS, SCIENCE & COMMERCE COLLEGE
BHATKAL 581320 (U.K.)

PRINCIPAL
Anjuman Arts, Science & Commerce College
& P.G. Centre
BHATKAL-581 320